# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಬನಹಟ್ಟಿ</u>

**<u>ಸಿ.ಸಿ.ನಂ.613/2023</u>**

1) ಗುರುಪಾದ ಉರ್ಫ ಗುರಪ್ಪ ತಂದೆ ಬಸಪ್ಪ ಮುಗಳಖೋಡ,
ಸಾಃ ಚಿಮ್ಮಡ.

.....ಫಿರ್ಯಾದಿದಾರ

– ವಿರುದ್ಧ –

1) ಮಂಜುನಾಥ ತಂದೆ ಶ್ರೀಶೈಲ ಬಂಡಿ,
ಸಾಃ ಬಿಸನಾಳ.

......ಆರೋಪಿ

**<u>– ಆಪಾದನೆ –</u>**

ನಾನು ಶ್ರೀಮತಿ ಶುಷ್ಮ ಟಿ.ಸಿ. ಬಿ.ಕಾಂ., ಎಲ್.ಎಲ್.ಬಿ., ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ. ದಂಡಾಧಿಕಾರಿಗಳು ಬನಹಟ್ಟಿ , ತಾ:ರಬಕವಿ-ಬನಹಟ್ಟಿ ಹೊರೆಸುವ ಆಪಾದನೆ ಏನೆಂದರೆ,

ಆರೋಪಿಯಾದ ನೀವು ಫಿರ್ಯಾದಿದಾರರಿಗೆ ಕಾನೂನುಬದ್ಧವಾಗಿ ಕೊಡಬೇಕಾಗಿದ್ದ ರೂ.9,00,000/- ಗಳ ಪಾವತಿಗಾಗಿ ನಿಮ್ಮ ಖಾತೆ ಇರುವ ಎಕ್ಸಿಸ್ ಬ್ಯಾಂಕ್ ಲಿಮಿಟೆಡ್, ಸೈದಾಪೂರ ಬ್ಯಾಂಕಿನ ಚೆಕ್ ನಂ.207538 ನ್ನು ರೂ.9,00,000/-ಗಳಿಗೆ 16-03-2023 ರ ದಿನಾಂಕ ನಮೂದಿಸಿ ಫಿರ್ಯಾದಿದಾರರಿಗೆ ನೀಡಿದ್ದು, ಅವರು ಸದರಿ ಚೆಕ್ಕನ್ನು ತಮ್ಮ ಬ್ಯಾಂಕಿನ ಮೂಲಕ ನಗದೀಕರಿಸಲು ಹಾಕಿದಾಗ ನಿಮ್ಮ ಬ್ಯಾಂಕಿನವರು **"Account closed"** ಎನ್ನುವ ಹಿಂಬರಹದೊಂದಿಗೆ ದಿನಾಂಕ 18-03-2023 ರಂದು ಸದರಿ ಚೆಕ್ಕು ನಗದೀಕರಣವಾಗದೇ ವಾಪಸ್ಸು ಬಂದಿದ್ದು, ಆ ಬಗ್ಗೆ ಫಿರ್ಯಾದಿದಾರರು ತಮ್ಮ ವಕೀಲರ ಮೂಲಕ ದಿನಾಂಕ 15-04-2023 ರಂದು ನಿಮಗೆ ಲೀಗಲ್ ನೋಟೀಸ್ ನೀಡಿದ್ದು, ಸದರಿ ನೋಟೀಸ್ ನಿಮಗೆ ದಿನಾಂಕ 17-04-2023 ರಂದು ಜಾರಿಯಾಗಿದ್ದು, ನಂತರ 15 ದಿನಗಳು ಕಳೆದರೂ ಸಹ ನೀವು ಚೆಕ್ಕಿನಲ್ಲಿ ನಮೂದಿಸಿದ ಹಣ ಪಾವತಿಸದೇ ಲಿಖಿತ ವರ್ಗಾವಣೆಗಳ ಕಾಯ್ದೆ (N.I.Act) ಕಲಂ.138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುವಿ ಅಂತಾ ಆಪಾದಿಸಲಾಗಿದೆ.

ಪ್ರಶ್ನೆ-1) ಈಗ ಓದಿ ಹೇಳಲಾದ ಆರೋಪಣೆ ತಿಳಿಯಿತೆ ?
ಉತ್ತರಃ- ತಿಳಿಯಿತು.

ಪ್ರಶ್ನೆ-2) ಸದರಿ ಆರೋಪಣೆಯನ್ನು ಒಪ್ಪಿ ಕೊಳ್ಳುವಿರೋ ಅಥವಾ ವಿಚಾರಣೆ ಆಗಲು ಬಯಸುವಿರೊ ?
ಉತ್ತರಃ- ಸುಳ್ಳು ವಿಚಾರಣೆಯಾಗಬೇಕು.

ಮೇಲೆ ಹೇಳಲಾದ ಆರೋಪಣೆಯನ್ನು ಆರೋಪಿತರಿಗೆ ತಿಳಿಯುವ ಭಾಷೆಯಲ್ಲಿ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಬರೆದುಕೊಳ್ಳಲಾಯಿತು ಎಂದು ದೃಢೀಕರಿಸಲಾಗಿದೆ.

ಸಹಿ/-

ಸ್ಥಳಃ ಬನಹಟ್ಟಿ
ದಿನಾಂಕ ಃ 04-11-2023

ಪ್ರ.ದ.ನ್ಯಾ. ದಂಡಾಧಿಕಾರಿಗಳು,
ಬನಹಟ್ಟಿ.